ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೊಡಗು ಜಿಲ್ಲೆಯಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಆಗಿರುವ ಜೀವಹಾನಿ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) -

115 (135) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2019-20 ಹಾಗೂ 2020-21ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಜೀವಹಾನಿಯ ಪ್ರಕರಣಗಳ ಸಂಖ್ಯೆ ಎಷ್ಟು; (ಪ್ರಕರಣವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ಮೃತರಾದ ವ್ಯಕ್ತಿಯ ಅವಲಂಬಿತರಿಗೆ ಸರ್ಕಾರದಿಂದ ದೊರೆತಿರುವ ಪರಿಹಾರಗಳೇನು;

(ಇ) ಸದರಿ ಫಲಾನುಭವಿಗಳಿಗೆ ಪರಿಹಾರ ನೀಡುವಲ್ಲಿ ಅನಾವಶ್ಯಕ ವಿಳಂಬ ಆಗಿದೆಯೇ; ಆಗಿದ್ದಲ್ಲಿ, ಸದರಿ ವಿಳಂಬಕ್ಕೆ ಕಾರಣಗಳೇನು? (ಸಂಪೂರ್ಣ ವಿವರ ನೀಡುವುದು)